ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: DTE-ADMIOEST(3)/12/2022 921

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 16.11.2022

**ಸುತ್ತೋಲೆ**

**ವಿಷಯ:** 2022-23ನೇ ಸಾಲಿನಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅವಶ್ಯಕವಾಗಿರುವ ಅರೆಕಾಲಿಕ ಉಪನ್ಯಾಸಕರ ಸಂಖ್ಯಾ ಮಾಹಿತಿಯನ್ನು ಸಲ್ಲಿಸುವ ಕುರಿತು.

**ಉಲ್ಲೇಖ**
1. ಸರ್ಕಾರದ ಪತ್ರ ಸಂಖ್ಯೆ: ಇಡಿ 09 ಡಿಟಿಇ 2022(ಭಾಗ-1), ದಿನಾಂಕ: 04.06.2022
2. ತಾಂತ್ರಿಕ ಶಿಕ್ಷಣ ಇಲಾಖೆಯ ಜ್ಞಾಪನ ಸಂಖ್ಯೆ: DTE-ADMIOEST(3)/12/2022, ದಿ: 29.07.2022
3. ತಾಂತ್ರಿಕ ಶಿಕ್ಷಣ ಇಲಾಖೆಯ ಸುತ್ತೋಲೆ ಸಂಖ್ಯೆ: DTE-ADMIOEST(3)/12/2022, ದಿ: 12.10.2022
4. ಪ್ರಾಂಶುಪಾಲರಿಂದ ಹೆಚ್ಚುವರಿಯಾಗಿ ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಪಡೆಯಲು ಅನುಮತಿ ನೀಡುವಂತೆ ಸ್ವೀಕೃತ ಪ್ರಸ್ತಾವನೆಗಳ ಮೇರೆಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1) ರ ಸರ್ಕಾರದ ಪತ್ರದಲ್ಲಿ, 2022-23ನೇ ಸಾಲಿಗೆ ಖಾಯಂ ಉಪನ್ಯಾಸಕರಿಗೆ ಬೋಧನಾ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಯುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ 2022-23ನೇ ಶೈಕ್ಷಣಿಕ ವರ್ಷದಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆದುರಾಗಿ ಅರೆಕಾಲಿಕ ಉಪನ್ಯಾಸಕರುಗಳ ಸೇವೆಯನ್ನು 2022-23ನೇ ಸಾಲಿನ ಅಂತ್ಯದವರೆಗೆ(ಮಾರ್ಚ್-2023) ಪಡೆಯಲು ಸರ್ಕಾರದ ಅನುಮತಿ ನೀಡಲಾಗಿರುತ್ತದೆ.

ಅದರಂತೆ ಉಲ್ಲೇಖ(2) ರಲ್ಲಿ, ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ 2022-23ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಪಡೆದುಕೊಂಡಿರುವುದಕ್ಕೆ, 2022-23ನೇ ಸಾಲಿನ ಶೈಕ್ಷಣಿಕ ವೇಳಾಪಟ್ಟಿಗೆ ಅನುಗುಣವಾಗಿ, ಕಾರ್ಯನಿರ್ವಹಿಸಿದ ಅವಧಿಗೆ 2022-23ನೇ ಸಾಲಿನ ಆರ್ಥಿಕ ವರ್ಷದ ಅಂತ್ಯದವರೆಗೆ(ಮಾರ್ಚ್-2023) ಮಾತ್ರ ತಿಳಿಸಿರುವ ಸಂಖ್ಯೆಯ ಮಿತಿಯೊಳಗೆ ಒಳಪಟ್ಟು ಅನುಮೋದನೆ ನೀಡಿ, ಸದರಿ ಅರೆಕಾಲಿಕ ಉಪನ್ಯಾಸಕರುಗಳ ಸೇವೆಯನ್ನು ಪಡೆದುಕೊಂಡಿರುವುದಕ್ಕೆ ಇಲಾಖೆಯ ಲೆಕ್ಕ ಶೀರ್ಷಿಕೆ 2203-00-105-0-01-324 ಅಡಿಯಲ್ಲಿ ಭತ್ಯೆಯನ್ನು ಭರಿಸಲು ಅನುಮತಿ ನೀಡಲಾಗಿತ್ತು. ಮುಂದುವರೆದು, ಉಲ್ಲೇಖ(3) ರಲ್ಲಿ 2022-23ನೇ ಸಾಲಿನಲ್ಲಿ ಹೊಸದಾಗಿ ಆರಂಭಗೊಂಡಿರುವ ಸಂಸ್ಥೆಗಳಿಗೆ ಅರೆಕಾಲಿಕ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿರುತ್ತದೆ.

ಉಲ್ಲೇಖ(4)ರಲ್ಲಿ ಪ್ರಸ್ತುತ ನಡೆಯುತ್ತಿರುವ 1, 3 ಮತ್ತು 5ನೇ ಬೆಸ ಸೆಮಿಸ್ಟರ್ ತರಗತಿ ಪಠ್ಯಕ್ರಮದನ್ವಯ ಖಾಯಂ ಬೋಧಕ ವರ್ಗದವರಿಗೆ ಬೋಧನಾ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಯುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಇನ್ನು ಹೆಚ್ಚುವರಿಯಾಗಿ ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಪಡೆಯಲು ಅನುಮತಿ ನೀಡುವಂತೆ ಹಲವಾರು ಸಂಸ್ಥೆಗಳ ಪ್ರಾಂಶುಪಾಲರು ಕೋರಲಾಗಿರುತ್ತದೆ.

ಏತನ್ಮಧ್ಯೆ, ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿನ ಸರ್ಕಾರಿ ಅನುದಾನಿತ ಸಂಸ್ಥೆಗಳಲ್ಲಿ ಎಐಸಿಟಿಇರನ್ವಯ ಪರಿಷ್ಕೃತ ಬೋಧಕ ಮತ್ತು ವಿದ್ಯಾರ್ಥಿಗಳ ಅನುಪಾತ ರಂತೆ(1:25) ರಂತೆ ಹೆಚ್ಚುವರಿಯಾಗಿ ಗುರುತಿಸಲಾದ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಉಪನ್ಯಾಸಕರುಗಳನ್ನು ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಿಗೆ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ಅನ್ಯಕಾರ್ಯನಿಮಿತ್ತ ನಿಯೋಜಿಸಿ ಆದೇಶಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಈಗಾಗಲೇ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಅರೆಕಾಲಿಕ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಪ್ರಾಂಶುಪಾಲರಿಗೆ ಅನುಮತಿ ನೀಡಲಾದ ಸಂಖ್ಯೆಯನ್ನು ಕಡಿತಗೊಳಿಸಬೇಕಾಗಿರುತ್ತದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿಗೆ ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಖಾಯಂ ಉಪನ್ಯಾಸಕರಿಗೆ (ಸರ್ಕಾರಿ / ಸರ್ಕಾರಿ ಅನುದಾನಿತ) ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರದಲ್ಲಿ ಉಳಿಕೆಯಾಗುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಅತ್ಯವಶ್ಯಕವಾಗಿರುವ ಅರೆಕಾಲಿಕ ಉಪನ್ಯಾಸಕರ ಸಂಖ್ಯಾ ಮಾಹಿತಿಯನ್ನು ಗೂಗಲ್ ಫಾರಂ (Google Form Link) "https://forms.gle/PczxjribqD7MUTyVA" ನಲ್ಲಿ ದಿನಾಂಕ: **17.11.2022** ರೊಳಗಾಗಿ ತಪ್ಪದೇ ಅಪ್‌ಡೇಟ್ ಮಾಡಲು ತಿಳಿಸಿದೆ.

"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"

16/11/22

**ಜಂಟಿ ನಿರ್ದೇಶಕರು(ಆಡಳಿತ),**
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

**ಇವರಿಗೆ:-**

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ.

**ಪ್ರತಿ:-**

ನೋಡಲ್ ಅಧಿಕಾರಿ, ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.